ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್, ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 2/12/2021

ಪರಿಷತ್‌ನಲ್ಲಿ ಮೊಬೈಲ್‌ಗೆ ನಿರ್ಬಂಧ

ವಿಕ ಸುದ್ದಿಲೋಕ ಬೆಂಗಳೂರು

ಕಲಾಪದಲ್ಲಿ ಮೊಬೈಲ್‌ನಲ್ಲಿ ಅಶ್ಲೀಲ ಚಿತ್ರ ವೀಕ್ಷಣೆ ವಿಚಾರವನ್ನು ಸಭಾಪತಿಯವರು ನೀತಿ ನಿರೂಪಣಾ ಸಮಿತಿಯ ತನಿಖೆಗೆ ಒಪ್ಪಿಸುವ ಜತೆಗೆ ಮೊಬೈಲ್ ಬಳಕೆಗೂ ನಿರ್ಬಂಧ ವಿಧಿಸಿದ್ದಾರೆ.

ಸೋಮವಾರ ಪರಿಷತ್ತಿನ ಕಲಾಪ ಆರಂಭವಾಗುತ್ತಿದ್ದಂತೆಯೇ ವಿಷಯ ಪ್ರಸ್ತಾಪಿಸಿದ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ''ಸದಸ್ಯರೊಬ್ಬರು ಕಲಾಪದ ವೇಳೆ ಮೊಬೈಲ್‌ನಲ್ಲಿ ಕೆಲವು ಅಕ್ಷೇಪಾರ್ಹ ದೃಶ್ಯಗಳನ್ನು ವೀಕ್ಷಿಸಿದ್ದಾರೆ ಎಂದು ವರದಿಯಾಗಿದೆ. ಕಾಂಗ್ರೆಸ್ ಸದಸ್ಯ ಬಿ. ಕೆ.ಹರಿಪ್ರಸಾದ್, ಬಿಜೆಪಿಯ ತೇಜಸ್ವಿನಿಗೌಡ ಮತ್ತು ಜೆಡಿಎಸ್‌ನ ಮರಿತಿಬ್ಬೇಗೌಡ ಅವರನ್ನೊಳಗೊಂಡ ಸಮಿತಿಯು ಪರಿಶೀಲನೆ ನಡೆಸಿ ವರದಿ ಸಲ್ಲಿಸಲಿದೆ.'' ಎಂದು ಪ್ರಕಟಿಸಿದರು.

''ಸದನದ ಗೌರವಕ್ಕೆ ಧಕ್ಕೆಯಾಗುವಂತೆ ಯಾರೂ ನಡೆದುಕೊಳ್ಳಬಾರದು. ಎಲ್ಲರೂ ಸದನದ ಗೌರವ ಕಾಪಾಡಬೇಕು'' ಎಂದು ಸಭಾಪತಿ ಮನವಿ ಮಾಡಿದರು.

ಸದಸ್ಯ ಪ್ರಕಾಶ್ ರಾಥೋಡ್ ಅವರು ಕಲಾಪದ ವೇಳೆ ಮೊಬೈಲ್‌ನಲ್ಲಿ ಚಿತ್ರ ನೋಡುತ್ತಿದ್ದುದ್ದನ್ನು ಸುದ್ದಿ ವಾಹಿನಿಗಳು ಪ್ರಸಾರ ಮಾಡಿದ್ದವು. ಆದರೆ, ರಾಥೋಡ್ ಆರೋಪವನ್ನು ನಿರಾಕರಿಸಿದ್ದರು.

ನಿರ್ಬಂಧ ಇದ್ದರೂ ಬಳಕೆ

''ಕಳೆದ ವರ್ಷ ಜೂನ್ ತಿಂಗಳಲ್ಲೇ ಸದಸ್ಯರು ಕಲಾಪದ ವೇಳೆ ಮೊಬೈಲ್ ಬಳಕೆ ಮಾಡಬಾರದೆಂದು ನಿರ್ಬಂಧ ವಿಧಿಸಲಾಗಿತ್ತು. ಆದರೂ ಕೆಲ ಸದಸ್ಯರು ಮೊಬೈಲ್ ಬಳಕೆ ಮಾಡುತ್ತಿರುವ ವಿಚಾರ ಗಮನಕ್ಕೆ ಬಂದಿದೆ. ಹಾಗಾಗಿ, ಇನ್ನು ಮುಂದೆ ಯಾವುಬ್ಬ ಸದಸ್ಯರೂ ಮೊಬೈಲ್ ಬಳಕೆ ಮಾಡಬಾರದು'' ಎಂದು ಸಭಾಪತಿ ಕೆ.ಪ್ರತಾಪ ಚಂದ್ರ ಶೆಟ್ಟಿ ಆದೇಶಿಸಿದರು.

''ಒಂದು ವೇಳೆ ಕಲಾಪದಲ್ಲಿ ಪಾಲ್ಗೊಳ್ಳಲು ಮೊಬೈಲ್‌ನಲ್ಲಿ ಸಂಗ್ರಹಿಸಿ ಕೊಂಡಿರುವ ಮಾಹಿತಿ ಬಳಸಿಕೊಳ್ಳಬೇಕಾದರೆ ಮೊದಲೇ ಪೀಠದಿಂದ ಅನುಮತಿ ಪಡೆಯಬೇಕು'' ಎಂದು ಸೂಚಿಸಿದರು.